ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕೇಂದ್ರೀಕೃತ ದಾಖಲಾತಿ ಘಟಕ, ಕಾವೇರಿ ಭವನದ ಎದುರು, ಕೆ.ಜಿ.ರಸ್ತೆ, ಬೆಂಗಳೂರು–560 009**

ಸಂಖ್ಯೆ: CAC/03/ GPTR-2022/ಮೌಲ್ಯಮಾಪನ/2022–23 ದಿನಾಂಕ:03–10–2022

# ಪ್ರಕಟಣೆ

ವಿಷಯ : 2022 ಪದವೀಧರ ಪ್ರಾಥಮಿಕ ಶಿಕ್ಷಕರ ನೇಮಕಾತಿಗೆ ಸಂಬಂಧಿಸಿದಂತೆ 1:2 ಪರಿಶೀಲನಾ ಪಟ್ಟಿಯಲ್ಲಿ ಪರಿಗಣಿಸಲ್ಪಟ್ಟಿರುವ ಅಭ್ಯರ್ಥಿಗಳು ಮೂಲದಾಖಲೆಗಳ ಪರಿಶೀಲನೆಗೆ ನಿಗದಿತ ದಿನಾಂಕದೊಳಗೆ ಹಾಜರಾಗುವ ಕುರಿತು.

*******

ಪದವೀಧರ ಪ್ರಾಥಮಿಕ ಶಿಕ್ಷಕ (6 ರಿಂದ 8ನೇ ತರಗತಿ) ನೇಮಕಾತಿಗೆ ಸಂಬಂಧಿಸಿದಂತೆ 1:2 ಪರಿಶೀಲನಾ ಪಟ್ಟಿಯನ್ನು ಇಲಾಖಾ ವೆಬ್‌ಸೈಟ್ https://schooleducation.kar.nic.in ನಲ್ಲಿ ಪ್ರಕಟಿಸಲಾಗಿದೆ. ಸದರಿ ಪಟ್ಟಿಗಳಲ್ಲಿ ಪರಿಗಣಿಸಲ್ಪಟ್ಟಿರುವ ಅಭ್ಯರ್ಥಿಗಳು ಸಂಬಂಧಪಟ್ಟ ಜಿಲ್ಲೆಯ ಉಪನಿರ್ದೇಶಕರು (ಆಡಳಿತ) ಹಾಗೂ ನೇಮಕಾತಿ ಪ್ರಾಧಿಕಾರ ರವರ ಕಛೇರಿಯಲ್ಲಿ ಮೂಲದಾಖಲೆಗಳ ಪರಿಶೀಲನೆಗೆ ಹಾಜರಾಗುವ ಅಭ್ಯರ್ಥಿಗಳಿಗೆ ಸೂಚನೆಗಳು.

1. ಪ್ರಕಟಿತ 1:2 ಪರಿಶೀಲನಾ ಪಟ್ಟಿಯಲ್ಲಿ ಪರಿಗಣಿಸಲ್ಪಟ್ಟಿರುವ ಬಗ್ಗೆ ಅಭ್ಯರ್ಥಿಯು ಖಾತ್ರಿ ಪಡಿಸಿಕೊಳ್ಳುವುದು.
2. ಅಭ್ಯರ್ಥಿಗಳು ಪ್ರಕಟಿತ 1:2 ಪಟ್ಟಿಗೆ ಸಂಬಂಧಿಸಿದಂತೆ ತಮ್ಮ ಮನವಿಗಳಿದ್ದಲ್ಲಿ ಸಂಬಂಧಪಟ್ಟ ಜಿಲ್ಲೆಯ ಉಪನಿರ್ದೇಶಕರು (ಆಡಳಿತ) ಮತ್ತು ನೇಮಕಾತಿ ಪ್ರಾಧಿಕಾರ ರವರ ಕಚೇರಿಯನ್ನು ಸಂಪರ್ಕಿಸುವುದು.
3. ಅಭ್ಯರ್ಥಿಗಳ ಮೂಲದಾಖಲೆಗಳ ಪರಿಶೀಲನೆಯನ್ನು ಆಯಾ ಜಿಲ್ಲೆಯ ಉಪನಿರ್ದೇಶಕರು (ಆಡಳಿತ) ಹಾಗೂ ನೇಮಕಾತಿ ಪ್ರಾಧಿಕಾರ ರವರ ಕಛೇರಿಯಲ್ಲಿ ದಿನಾಂಕ:06–10–2022 ರಿಂದ ಪ್ರಾರಂಭವಾಗುವುದು.
4. ಪರಿಶೀಲನಾ ಪಟ್ಟಿಯಲ್ಲಿರುವ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ನಮೂದಿಸಿರುವ ಮಾಹಿತಿಗಳಿಗೆ ಸಂಬಂಧಿಸಿದ **ಎಲ್ಲಾ ಮೂಲ ಪ್ರಮಾಣಪತ್ರಗಳನ್ನು ಕ್ರಮವಾಗಿ ಜೋಡಿಸಿಕೊಂಡು ಮುದ್ರಿತ ಆನ್‌ಲೈನ್ ಅರ್ಜಿ ಪ್ರತಿಯೊಂದಿಗೆ ತಮ್ಮ ಮೂಲದಾಖಲೆಗಳ ಪರಿಶೀಲನೆಗೆ ನಿಗದಿತ ವೇಳಾಪಟ್ಟಿಯಂತೆ** (ವೆಬ್‌ಸೈಟ್‌ನಲ್ಲಿ ಪ್ರಕಟಿಸಿದಂತೆ) ಸಂಬಂಧಪಟ್ಟ ಜಿಲ್ಲೆಯ ಉಪನಿರ್ದೇಶಕರು (ಆಡಳಿತ) ಹಾಗೂ ನೇಮಕಾತಿ ಪ್ರಾಧಿಕಾರ, ಸಾರ್ವಜನಿಕ ಶಿಕ್ಷಣ ಇಲಾಖೆ, ರವರ ಕಛೇರಿಯಲ್ಲಿ ತಪ್ಪದೇ ಹಾಜರಾಗುವುದು. ಈ ಸಂಬಂಧ ಅಗತ್ಯ ಮಾಹಿತಿಗಾಗಿ ಸಂಬಂಧಪಟ್ಟ ಜಿಲ್ಲೆಯ ಉಪನಿರ್ದೇಶಕರ ಕಛೇರಿಯನ್ನು ಸಂಪರ್ಕಿಸುವುದು. ಹಾಗೂ ಕೇಂದ್ರೀಕೃತ ದಾಖಲಾತಿ ಘಟಕವನ್ನು ಸಂಪರ್ಕಿಸದಿರಲು ತಿಳಿಸಿದೆ.

5. ಅಭ್ಯರ್ಥಿಯು ಮೂಲದಾಖಲೆಗಳ ಪರಿಶೀಲನಾ ವೇಳೆಯಲ್ಲಿ ಯಾವುದೇ ತಪ್ಪು ಮಾಹಿತಿಗಳನ್ನು ನೀಡಿದಲ್ಲಿ ಅಥವಾ ಆನ್‌ಲೈನ್ ಅರ್ಜಿಯಲ್ಲಿ ಭರ್ತಿ ಮಾಡಿರುವ ಮಾಹಿತಿಗಳಿಗೆ ಸಂಬಂಧಿಸಿದ ಮೂಲಪ್ರಮಾಣ ಪತ್ರಗಳನ್ನು ಸಲ್ಲಿಸದೇ ಮುಂದಿನ ಆಗುಹೋಗುಗಳಿಗೆ ಸಂಬಂಧಪಟ್ಟ ಅಭ್ಯರ್ಥಿಗಳೇ ನೇರ ಹೊಣೆಗಾರರಾಗುತ್ತಾರೆ.

**ದಿನಾಂಕ:01-10-2022 ರಂದು ಅನುಬಂಧ-1ರಲ್ಲಿ ನೀಡಲಾದ ಈ ಕೆಳಕಂಡ ಅಂಶಗಳಿಗೆ ಸ್ಪಷ್ಟೀಕರಣ**

1. ಆನ್‌ಲೈನ್ ಅರ್ಜಿಯಲ್ಲಿ **ಸಾಮಾನ್ಯ ವರ್ಗ (GM)** ಎಂದು ನಮೂದಿಸಿರುವ ಅಭ್ಯರ್ಥಿಗಳು **ಗ್ರಾಮೀಣ ಅಭ್ಯರ್ಥಿ** ಎಂದು ಮೀಸಲಾತಿ ಕೋರಿದ್ದಲ್ಲಿ ಅಂತಹವರು ಮಾತ್ರ ಸಕ್ಷಮ ಪ್ರಾಧಿಕಾರದಿಂದ ಪಡೆದ Non-Creamy Layer Certificate ಪರಿಶೀಲನೆಗೆ ಸಲ್ಲಿಸುವುದು.

2. ಗ್ರಾಮೀಣ ಮೀಸಲಾತಿ ಹೊಂದಿರುವ ಅಭ್ಯರ್ಥಿಗಳು **'ಗ್ರಾಮೀಣ ಅಭ್ಯರ್ಥಿ ವ್ಯಾಸಂಗ ಪ್ರಮಾಣ ಪತ್ರ'** (ನಿಗದಿತ ದಿನಾಂಕದೊಳಗೆ ಕ್ಷೇತ್ರ ಶಿಕ್ಷಣಾಧಿಕಾರಿಯ ಮೊಹರು ಮತ್ತು ಮೇಲು ಸಹಿ ಇರುವ) ಪರಿಶೀಲನೆಗೆ ಸಲ್ಲಿಸುವುದು.

**ವಿಶೇಷಾಧಿಕಾರಿ**